ಕರ್ನಾಟಕ ಲೋಕಾಯುಕ್ತ

ನಂ.ಕಂಪ್ಲೆಂಟ್/ಉಪಲೋಕ್/ಬಿಡಿ-2400/2013/ಡಿಆರ್ಇ-1

ಬಹುಮಹಡಿಗಳ ಕಟ್ಟಡ,
ಡಾ:ಅಂಬೇಡ್ಕರ್ ವೀದಿ,
ಬೆಂಗಳೂರು.
ದಿನಾಂಕ : 8/3/2017

## ಕರ್ನಾಟಕ ಲೋಕಾಯುಕ್ತ ಕಾಯಿದೆ, 1984 ರ ಕಲಂ 12(1) ರನ್ವಯ ವರದಿ

**ವಿಷಯ:** ಶ್ರೀ.ಕೆ.ಜಿ.ರಂಗಯ್ಯ, ಕ್ಷೇತ್ರ ಶಿಕ್ಷಣಾಧಿಕಾರಿ, ಚಿಂತಾಮಣಿ ತಾಲ್ಲೂಕು, ಮತ್ತು (2) ಶ್ರೀ.ಎ.ಅಜಿತ್‌ಪ್ರಸಾದ್, ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲೆ, ಇವರ ವಿರುದ್ಧ ಸಲ್ಲಿಸಿದ ದೂರಿನ ಸಂಬಂಧ ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(1) ರಡಿಯಲ್ಲಿನ ವರದಿ.

******

1) ಶ್ರೀ.ಕೃಷ್ಣಾರೆಡ್ಡಿ ಜಿ.ಆರ್ ಬಿನ್ ರೆಡ್ಡಿ ರಾಮಸ್ವಾಮಿ, 'ಶಿವಕೃಪ' ವೆಂಕಟೇಶ್ವರ ಬಡಾವಣೆ, ಚಿಂತಾಮಣಿ ಟೌನ್ ಮತ್ತು ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ, (ಇನ್ನು ಮುಂದೆ ದೂರುದಾರರು ಎಂದು ಕರೆಯಲ್ಪಡುತ್ತಾರೆ) ರವರು (1) ಶ್ರೀ.ಕೆ.ಜಿ.ರಂಗಯ್ಯ, ಕ್ಷೇತ್ರ ಶಿಕ್ಷಣಾಧಿಕಾರಿ, ಚಿಂತಾಮಣಿ ತಾಲ್ಲೂಕು, ಮತ್ತು (2) ಶ್ರೀ.ಎ.ಅಜಿತ್‌ಪ್ರಸಾದ್, ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲೆ, (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ದೂರು ಸಲ್ಲಿಸಿದ ಮೇರೆಗೆ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 9 ರಡಿಯಲ್ಲಿ ದತ್ತವಾದ ಅಧಿಕಾರ ಚಲಾಯಿಸಿ, ವಿಚಾರಣೆಗೆ ತೆಗೆದುಕೊಂಡು ತನಿಖೆ ಮಾಡಿದೆ.

2) ದೂರುದಾರರು ತಮ್ಮ ದೂರಿನಲ್ಲಿ ಚಿಂತಾಮಣಿ ತಾಲ್ಲೂಕು, ಅಂಬಾಜಿದುರ್ಗ ಹೋಬಳಿ, ಕಾವಲುಗಾನಹಳ್ಳಿ ಬಳಿ ಇರುವ ಜೈನ್ ಪಬ್ಲಿಕ್ ಕಾನ್ವೆಂಟ್ ಶಾಲೆಯಲ್ಲಿ ಎಲ್.ಕೆ.ಜಿ.ಯಿಂದ 8ನೇ ತರಗತಿವರೆಗೆ ತರಗತಿಗಳನ್ನು ನಡೆಸುತ್ತಿದ್ದು, 2013-14ನೇ ಶೈಕ್ಷಣಿಕ ವರ್ಷದಿಂದ ಪ್ರತಿಯೊಬ್ಬ ವಿದ್ಯಾರ್ಥಿ ಪೋಷಕರಿಂದ ಕ್ರಮವಾಗಿ ರೂ.30,000/- ದಿಂದ ರೂ.40,000/- ವರೆಗೆ ಬೇರೆ ಬೇರೆ ರೂಪದಲ್ಲಿ ಕಡ್ಡಾಯವಾಗಿ ಡೊನೇಷನ್ ಹಣ ವಸೂಲಿ ಮಾಡುತ್ತಿದ್ದಾರೆ. ಈ ಬಗ್ಗೆ ಎಲ್ಲಾ ವಿವರಗಳನ್ನು ದಿ.5/7/13 ಮತ್ತು ದಿ.10/6/13 ರಂದು ಚಿಂತಾಮಣಿ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೂ ಮತ್ತು ದಿ.7/6/13 ಮತ್ತು 12/9/13 ರಂದು ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿಕ್ಕಬಳ್ಳಾಪುರ ಇವರಿಗೆ ದೂರು ನೀಡಿದರೂ ಸಹ ಅವರು ಯಾವುದೇ ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯ ಮಾಡಿರುತ್ತಾರೆಂದು ಆಪಾದಿಸಿ ಈ ದೂರನ್ನು ಸಲ್ಲಿಸಿರುತ್ತಾರೆ.

3) ದೂರಿನ ಬಗ್ಗೆ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಆದೇಶಿಸಲಾಗಿತ್ತು. ಅಪರ ಆಯುಕ್ತರು (ಆಡಳಿತ), ಇವರು ಜಿಲ್ಲಾ ಉಪಯೋಜನಾ

ಸಮನ್ವಯಾಧಿಕಾರಿಗಳು, ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ, ಚಿಕ್ಕಮಗಳೂರು ಜಿಲ್ಲೆ. ಇವರಿಂದ ತನಿಖೆಯನ್ನು ನಡೆಸಿ ವರದಿಯನ್ನು ಸಲ್ಲಿಸಿದ್ದು, ಸದರಿಯವರು ತಮ್ಮ ವರದಿಯಲ್ಲಿ ದೂರುದಾರರ ದೂರಿಗೆ ಸಂಬಂಧಿಸಿದಂತೆ, ಬಿ.ಇ.ಓ.ರವರು ಸಂಬಂಧಿಸಿದ ಜೈನ್ ಶಾಲೆಗೆ ಭೇಟಿ ನೀಡಿ ದೂರುದಾರರನ್ನು ಕರೆಸಿ ಅವರ ಸಮ್ಮುಖದಲ್ಲಿ ವಿಚಾರಣೆ ನಡೆಸಿ ಮುಂದಿನ ಕ್ರಮಕ್ಕಾಗಿ ಮೇಲಾಧಿಕಾರಿಗಳಿಗೆ ಶಿಫಾರಸ್ಸು ಮಾಡಬಹುದಾಗಿತ್ತು. ದೂರಿನ ಸಂಬಂಧ ವಿವರವಾಗಿ ತಪಾಸಣೆ ಮಾಡಿ ಇಲಾಖೆಯ ನಿಯಮಗಳನ್ನು ಪಾಲನೆ ಮಾಡದೇ ಇರುವುದು ಕಂಡುಬಂದಲ್ಲಿ ಸದರಿ ಶಾಲೆಗೆ ಕಾರಣ ಕೇಳಿ ನೋಟೀಸು ಜಾರಿ ಮಾಡುವುದರ ಸಂಬಂಧ ಕ್ರಮ ಕೈಗೊಳ್ಳಲು ಮೇಲಾಧಿಕಾರಿಗಳಿಗೆ ಶಿಫಾರಸ್ಸು ಮಾಡಬಹುದಾಗಿತ್ತು. ಈ ಯಾವ ಕ್ರಮಗಳನ್ನು ಕೈಗೊಳ್ಳದೆ ಇರುವುದು ಹಾಗೂ ಇಲಾಖಾ ನಿಯಮಗಳನ್ನು ಪಾಲಿಸುವಲ್ಲಿ ಬಿ.ಇ.ಓ. ರವರು ವಿಫಲರಾಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ ಎಂದು ವರದಿಯಲ್ಲಿ ಹೇಳಿರುತ್ತಾರೆ.

4) ದಿ.1/7/14 ರಂದು ಅಪರ ಆಯುಕ್ತರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು. ಇವರು ಸಲ್ಲಿಸಿರುವ ವರದಿಯಲ್ಲಿ ಇಲಾಖಾ ಆದೇಶಗಳನ್ನು ಉಲ್ಲಂಘಿಸಿರುವ ಜೈನ್ ಪಬ್ಲಿಕ್ ಕಾನ್ವೆಂಟ್ ಶಾಲೆಯ ಆಡಳಿತ ಮಂಡಳಿಗೆ ನಿಯಮಾನುಸಾರ ನೋಟೀಸ್ ಜಾರಿಗೊಳಿಸಿ ನೋಂದಣಿ/ಮಾನ್ಯತೆಯನ್ನು ಹಿಂಪಡೆಯಲು ಸೂಕ್ತ ಕ್ರಮ ವಹಿಸುವಂತೆ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿಕ್ಕಬಳ್ಳಾಪುರ, ಇವರಿಗೆ ತಿಳಿಸಲಾಗಿದೆಯೆಂದು ವರದಿ ನೀಡಿರುತ್ತಾರೆ.

5) ವಿಚಾರಣಾ ವರದಿಯ ಮೇಲೆ ಎದುರುದಾರರು ಆಕ್ಷೇಪಣೆಯನ್ನು ಸಲ್ಲಿಸಿದ್ದು, 1ನೇ ಎದುರುದಾರರು ತನ್ನ ಆಕ್ಷೇಪಣೆಯಲ್ಲಿ ದೂರಿಗೆ ಸಂಬಂಧಿಸಿದಂತೆ ಈಗಾಗಲೇ ಮಾಹಿತಿ ಹಕ್ಕು ಅಧಿನಿಯಮದಡಿ ಅರ್ಜಿದಾರರಿಗೆ ಮಾಹಿತಿಯನ್ನು ಸಲ್ಲಿಸಲಾಗಿದೆ ಹಾಗೂ ಎಲ್ಲಾ ಖಾಸಗಿ ಶಾಲೆಗಳಿಗೆ ಕಚೇರಿಯ ಪತ್ರದಲ್ಲಿ ಅನುಸರಿಸಬೇಕಾದ ಕ್ರಮದ ಬಗ್ಗೆ ಹಾಗೂ ನಿಯಮಾನುಸಾರ ಶುಲ್ಕವನ್ನು ತೆಗೆದುಕೊಳ್ಳಲು, ಯಾವುದೇ ರೀತಿಯ ಡೊನೇಷನ್, ವಂತಿಗೆಗಳನ್ನು ವಸೂಲಿ ಮಾಡುವಂತಿಲ್ಲವೆಂದು ತಿಳಿಸಲಾಗಿದೆ. ಜೈನ್ ಪಬ್ಲಿಕ್ ಶಾಲೆ, ಕಾವಲುಗಾನಹಳ್ಳಿ, ಚಿಂತಾಮಣಿ ತಾಲ್ಲೂಕು, ಶಾಲೆಯವರು ಶಾಲಾ ಮಕ್ಕಳ ಪೋಷಕರಿಂದ ವಸೂಲು ಮಾಡುತ್ತಿರುವ ಶುಲ್ಕಗಳ ಪಟ್ಟಿಯ ವಿವರಗಳ ಮಾಹಿತಿಯನ್ನು ಸಲ್ಲಿಸಲಾಗಿದೆಯೆಂದು ತಿಳಿಸಿರುತ್ತಾರೆ.

6) 2ನೇ ಎದುರುದಾರರಾದ ಎ.ಅಜಿತ್‌ಪ್ರಸಾದ್ ರವರು ತನ್ನ ಆಕ್ಷೇಪಣೆಯಲ್ಲಿ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿಕ್ಕಬಳ್ಳಾಪುರ ಇವರು ದಿ.22/9/15 ರಂದು ಆಕ್ಷೇಪಣೆಯನ್ನು ಸಲ್ಲಿಸಿದ್ದು, ಸದರಿ ಆಕ್ಷೇಪಣೆಯನ್ನೇ ಅವರ ಆಕ್ಷೇಪಣೆಯೆಂದು ಪರಿಗಣಿಸಬೇಕೆಂದು ಹೇಳಿರುತ್ತಾರೆ. ಪ್ರಸಕ್ತ ಉಪ ನಿರ್ದೇಶಕರು, ಚಿಕ್ಕಬಳ್ಳಾಪುರ ಇವರು ದಿ.22/9/15 ರಂದು ನೀಡಿರುವ ವರದಿಯನ್ನು ಪರಿಶೀಲಿಸಿದಾಗ, ದೂರುದಾರರು ಆರೋಪಿಸಿರುವಂತೆ ಜೈನ್ ಪಬ್ಲಿಕ್ ಶಾಲೆಯವರು 2012-13ನೇ ಸಾಲಿನಲ್ಲಿ ಹೆಚ್ಚುವರಿಯಾಗಿ ವಿದ್ಯಾರ್ಥಿಗಳಿಂದ ಶುಲ್ಕವನ್ನು ವಸೂಲಿ ಮಾಡಿರುವುದು ಕಂಡುಬಂದಿರುವುದಿಲ್ಲ. ಆದರೆ, 2013-14ನೇ ಸಾಲಿನಲ್ಲಿ ರೂ.4,54,809/- ನ್ನು ಹೆಚ್ಚುವರಿಯಾಗಿ ವಸೂಲಿ ಮಾಡಿರುವುದು ಕಂಡುಬಂದಿದೆಯೆಂದು ಹೇಳಿರುವುದು ಕಂಡುಬರುತ್ತದೆ.

Sd/-

7) ಅಪರ ಆಯುಕ್ತರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರು ದಿ.1/7/14 ರಂದು ನೀಡಿರುವ ವರದಿಯಲ್ಲಿ ಇಲಾಖಾ ಆದೇಶಗಳನ್ನು ಉಲ್ಲಂಘಿಸಿರುವ ಜೈನ್ ಪಬ್ಲಿಕ್ ಕಾನ್ವೆಂಟ್ ಶಾಲೆಯ ಆಡಳಿತ ಮಂಡಳಿಗೆ ನಿಯಮಾನುಸಾರ ನೋಟೀಸ್ ಜಾರಿಗೊಳಿಸಿ ನೋಂದಣಿ/ಮಾನ್ಯತೆಯನ್ನು ಹಿಂಪಡೆಯಲು ಸೂಕ್ತ ಕ್ರಮ ವಹಿಸಲು ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿಕ್ಕಬಳ್ಳಾಪುರ ಇವರಿಗೆ ತಿಳಿಸಲಾಗಿದೆ ಎಂದು ವರದಿ ನೀಡಿರುವುದು ಕಂಡುಬರುತ್ತದೆ. ಆದರೆ, ಸದರಿ ನಿರ್ದೇಶನದ ಮೇರೆಗೆ ಎದುರುದಾರರು ಯಾವುದೇ ಕ್ರಮವನ್ನು ಕೈಗೊಂಡಿರುವುದು ಕಂಡುಬಂದಿರುವುದಿಲ್ಲ. ಅದೇರೀತಿ ದಿ.24/5/14 ರಂದು ಕೂಡ ಅಪರ ಆಯುಕ್ತರು, ಶಾಲೆಯ ಮೇಲೆ ನಿಯಮಾನುಸಾರ ಕ್ರಮ ವಹಿಸಲು ಉಪ ನಿರ್ದೇಶಕರಿಗೆ ತಿಳಿಸಿರುವ ವಿಚಾರವನ್ನು ಪತ್ರದಲ್ಲಿ ತಿಳಿಸಿರುತ್ತಾರೆ. ಜಿಲ್ಲಾ ಉಪಯೋಜನಾ ಸಮನ್ವಯ ಅಧಿಕಾರಿಗಳು ದಿ.10/4/14 ರಂದು ನೀಡಿರುವ ವಿಚಾರಣಾ ವರದಿಯಲ್ಲಿ ಬಿ.ಇ.ಓ ರವರು ಇಲಾಖಾ ನಿಯಮಗಳನ್ನು ಪಾಲಿಸುವಲ್ಲಿ ವಿಫಲರಾಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆಯೆಂದು ವರದಿಯನ್ನು ನೀಡಿರುವುದು ಕಂಡುಬರುತ್ತದೆ. ಆದರೂ ಸಹ ಉಪ ನಿರ್ದೇಶಕರು ಯಾವುದೇ ಕ್ರಮವನ್ನು ಕೈಗೊಳ್ಳದಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ.

8) ಈ ಮೇಲ್ಕಂಡ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡಾಗ, ನಿಯಮಗಳನ್ನು ಉಲ್ಲಂಘಿಸಿ ಶಾಲೆಗಳು ಡೊನೇಷನ್ ಹಾಗೂ ಶುಲ್ಕವನ್ನು ವಸೂಲಿ ಮಾಡುತ್ತಿರುವ ವಿಚಾರ 1 ಮತ್ತು 2ನೇ ಎದುರುದಾರರ ಗಮನಕ್ಕೆ ಬಂದಿದ್ದರೂ ಸಹ ಅವರು ಯಾವುದೇ ಕ್ರಮವನ್ನು ಕೈಗೊಳ್ಳದೆ ಕರ್ತವ್ಯ ನಿರ್ಲಕ್ಷ್ಯ ಮಾಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ.

9) ಮೇಲ್ಕಂಡ ಹಿನ್ನೆಲೆಯಲ್ಲಿ ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ, 12(1) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸಕ್ಷಮ ಪ್ರಾಧಿಕಾರಕ್ಕೆ ಇಲಾಖಾ ಆದೇಶಗಳನ್ನು ಉಲ್ಲಂಘಿಸಿರುವ ಜೈನ್ ಪಬ್ಲಿಕ್ ಕಾನ್ವೆಂಟ್ ಶಾಲೆಯ ನೋಂದಣಿ/ಮಾನ್ಯತೆಯನ್ನು ಹಿಂಪಡೆಯಲು ಹಾಗೂ ಶಾಲೆಯ ಮೇಲೆ ನಿಯಮಾನುಸಾರ ಕ್ರಮ ವಹಿಸಲು ಈ ಮೂಲಕ ಶಿಫಾರಸ್ಸು ಮಾಡಲಾಗಿರುತ್ತದೆ. ತದನಂತರ ಸಕ್ಷಮ ಪ್ರಾಧಿಕಾರವು ಈ ಸಂಸ್ಥೆಗೆ ಅಲ್ಲಿಂದ ಒಂದು ತಿಂಗಳೊಳಗೆ ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(2) ರಡಿಯಲ್ಲಿ ಕೈಗೊಳ್ಳಲಾದ ಕ್ರಮದ ಬಗ್ಗೆ ವರದಿ ಸಲ್ಲಿಸುವುದು.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

8/3/17.

(ನ್ಯಾಯಮೂರ್ತಿ ಸುಭಾಷ್ ಬಿ. ಅಡಿ)
ಉಪಲೋಕಾಯುಕ್ತರು-2,
ಕರ್ನಾಟಕ ರಾಜ್ಯ, ಬೆಂಗಳೂರು.